ಗುಲ್ಬರ್ಗಾ ನಗರದಲ್ಲಿ ಸರ್ದಾರ್ ವಲ್ಲಬಾಯಿ ಪಟೇಲ್ ಪ್ರತಿಮೆ ಸ್ಥಾಪನೆ

1079 (1425) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಸನ್ಮಾನ್ಯ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ನಗರದಲ್ಲಿ ಸನ್ಮಾನ್ಯ ಸರ್ದಾರ್ ವಲ್ಲಬಾಯಿ ಪಟೇಲ್ ಪ್ರತಿಮೆಯನ್ನು ಸ್ಥಾಪಿಸುವಾಗ ಆ ಪ್ರತಿಮೆ ಮೇಲೆ 'ವಂದೇ ಮಾತರಂ' ಬರಹವನ್ನು ಹಾಕಬೇಕೆಂದು ತೀರ್ಮಾನಿಸಿರುವುದು ಸರ್ಕಾರದ ಗಮನದಲ್ಲಿದೆಯೇ?

ಆ) ಹಾಗಾದಲ್ಲಿ ಈ ರೀತಿ ಕೆತ್ತಿಸದೆ ಇರುವುದಕ್ಕೆ ಕಾರಣವೇನು? ಅವರ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ?

ಇ) 'ವಂದೇ ಮಾತರಂ' ಬರಹವನ್ನು ಕೆತ್ತಿಸಿದವರ ಮೇಲೆ ಕ್ರಮ ಕೈಗೊಂಡಿರುವುದು ಸಾಧುವೇ ಇಂತಹವರ ಮೇಲೆ ಹಾಕಿಸಿರುವ ಮೊಕದ್ದಮೆ ಕೈಬಿಡುಗಡೆ ಪ್ರಸ್ತಾಪ ಸರ್ಕಾರದ ಮಂದಿದೆಯೇ?

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು) :

ಅ) ಸರ್ಕಾರದ ಗಮನಕ್ಕೆ ತರಲಾಗಿತ್ತು

ಆ) ಸಾದುವಲ್ಲವೆಂದು ಪರಿಗಣಿಸಲಾಗಿತ್ತು

ಇ) ಯಾರ ವಿರುದ್ಧ ಕ್ರಮ ಕೈಗೊಳ್ಳದೆ ಇರುವುದರಿಂದ ಪ್ರಶ್ನೆ ಉದ್ಭವಿಸುವುದಿಲ್ಲ.

ಬೆಂಗಳೂರಿನಲ್ಲಿ ಪ್ರವಾಸೋದ್ಯಮ ಇಲಾಖೆಯ ಕಾರ್ಯಕ್ರಮಗಳು

1080 (1577) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಪ್ರವಾಸೋದ್ಯಮ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಯಾವ ಯಾವ ಪ್ರೇಕ್ಷಣೀಯ ಸ್ಥಳಗಳನ್ನು ಪ್ರವಾಸಿ ಸ್ಥಳಗಳೆಂದು ಪ್ರವಾಸೋದ್ಯ ಇಲಾಖೆ ಗುರುತಿಸಿದೆ?

ಆ) ಬೆಂಗಳೂರಿನಲ್ಲಿ ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಒಂದು ದಿನದ ಪ್ರವಾಸ ಕಾರ್ಯಕ್ರಮದಲ್ಲಿ ಯಾವ ಯಾವ ಪ್ರವಾಸಿ ಸ್ಥಳಗಳನ್ನು ಪ್ರವಾಸಿಗರಿಗೆ ತೋರಿಸಲಾಗುತ್ತಿದೆ?

ಇ) ರಾಮನಗರದ ಬಳಿ ಇರುವ ಜಾನಪದ ಲೋಕ, ಇಸ್ಕಾನ್ ಟೆಂಪಲ್, ರಾಗಿಗುಡ್ಡದ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನ, ಬನ್ನೇರುಘಟ್ಟಗಳಿಗೆ ಪ್ರವಾಸಿಗರನ್ನು ಆಕರ್ಷಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಈ) 2000-2001ನೇ ಸಾಲಿನಲ್ಲಿ ಬೆಂಗಳೂರಿನಲ್ಲಿ ಪ್ರವಾಸೋದ್ಯಮಕ್ಕಾಗಿ ಖರ್ಚು ಮಾಡಿರುವ ಹಣ ಎಷ್ಟು?